**Bangalore**
**Regional News**
**31.12.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹೊಸವರ್ಷವನ್ನು ಸಾರ್ವಜನಿಕರು ಜವಾಬ್ದಾರಿಯುತವಾಗಿ ಆಚರಿಸುವಂತೆ ರಾಜ್ಯ ಸರ್ಕಾರ ಮನವಿ
2. ರಾಜ್ಯದೆಲ್ಲೆಡೆ ಹೊಸವರ್ಷದ ಆಗಮನಕ್ಕೆ ಕ್ಷಣಗಣನೆ ; ಪ್ರವಾಸಿ ತಾಣಗಳಲ್ಲಿ ಬಿಗಿ ಭದ್ರತೆ
3. ಕೋಗಿಲುಕ್ರಾಸ್‌ನಲ್ಲಿ ಬಾಂಗ್ಲಾದೇಶದ ಪ್ರಜೆಗಳು ಕಂಡುಬಂದರೆ ಗಡಿಪಾರು - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಎಚ್ಚರಿಕೆ
4. ನ್ಯಾಯಿಕ ತೀರ್ಮಾನಗಳನ್ನು ಪಾರದರ್ಶಕಗೊಳಿಸುವ ಹಿನ್ನೆಲೆ - ಕಂದಾಯ ನ್ಯಾಯಾಲಯಗಳಲ್ಲಿ ಆನ್‌ಲೈನ್ ವ್ಯವಸ್ಥೆ ಜಾರಿ

<><><><>

ಹೊಸ ವರ್ಷವನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಲು ರಾಜ್ಯದ ಜನತೆ ಸಿದ್ಧತೆ ಮಾಡಿಕೊಂಡಿದ್ದಾರೆ. ರಾಜಧಾನಿ ಬೆಂಗಳೂರಿನಲ್ಲಿ ಜನದಟ್ಟಣೆ ನಿಯಂತ್ರಿಸಲು ಪೊಲೀಸ್ ಇಲಾಖೆ ಹಲವು ಕ್ರಮಗಳನ್ನು ಕೈಗೊಂಡಿದೆ. ಪ್ರಮುಖವಾಗಿ ಮಹಾತ್ಮಾಗಾಂಧಿ ರಸ್ತೆಯ ಮೆಟ್ರೋ ನಿಲ್ದಾಣವನ್ನು ರಾತ್ರಿ ೧೦ಗಂಟೆಯ ಬಳಿಕ ತಾತ್ಕಾಲಿಕವಾಗಿ ಬಂದ್ ಮಾಡಲಾಗಿದೆ. ಬೆಂಗಳೂರಿನ ಪ್ರಮುಖ ರಸ್ತೆಗಳಾದ ಎಂ.ಜಿ. ರಸ್ತೆ, ಚರ್ಚ್ ಸ್ಟ್ರೀಟ್ ಹಾಗೂ ಬ್ರಿಗೇಡ್ ರಸ್ತೆಗಳಲ್ಲಿ ಜನದಟ್ಟಣೆ ಉಂಟಾಗುವ ಸಾಧ್ಯತೆಯಿದೆ. ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ನಗರದಲ್ಲಿ ೧೮೮ ಕಡೆಗಳಲ್ಲಿ ಡ್ರಿಂಕ್ ಡ್ರೈವ್ ತಪಾಸಣೆ, ಅಪಾಯಕಾರಿ ಸ್ಟಂಟ್ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ೬೨ ಸ್ಥಳಗಳನ್ನು ಗುರುತಿಸಿರುವುದಾಗಿ ಪೊಲೀಸರು ಮಾಹಿತಿ ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸಾರ್ವಜನಿಕರು ಹೊಸವರ್ಷವನ್ನು ಜವಾಬ್ದಾರಿಯುತವಾಗಿ ಆಚರಿಸುವಂತೆ ಮನವಿ ಮಾಡಿದ್ದಾರೆ. ಪೊಲೀಸ್ ಸಿಬ್ಬಂದಿಗೆ ಬಾಡಿ ಕ್ಯಾಮೆರಾಗಳನ್ನು ಧರಿಸಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಡಾ. ಜಿ. ಪರಮೇಶ್ವರ್

ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಪೊಲೀಸರು ವ್ಯಾಪಕ ಭದ್ರತಾ ಸಿದ್ಧತೆಗಳನ್ನು ಕೈಗೊಂಡಿದ್ದಾರೆ. ವಿಶೇಷವಾಗಿ ಮಹಿಳೆಯರ ಸುರಕ್ಷತೆಗಾಗಿ ನಗರದ ಪ್ರಮುಖ ಪ್ರದೇಶಗಳಲ್ಲಿ ಮಹಿಳಾ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಇದೇ ವೇಳೆ ನಮ್ಮ ಮೆಟ್ರೋ ಕೂಡ ಹಲವು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ರೈಲು ಸಂಚಾರದ ಸಮಯವನ್ನು ಹೆಚ್ಚಿಸಿದೆ. ಪ್ರಮುಖ ಮಾರ್ಗಗಳಾದ ಹಸಿರು ಮಾರ್ಗದಲ್ಲಿ ಬೆಳಗಿನ ಜಾವ ೨ ಗಂಟೆಯವರೆಗೆ ಹಳದಿ ಮಾರ್ಗದಲ್ಲಿ ೩.೧೦ರವರೆಗೆ ನೇರಳೆ ಮಾರ್ಗದಲ್ಲಿ ಬೆಳಗಿನ ಜಾವ ೧.೪೫ರವರೆಗೆ ಮೆಟ್ರೋ ಸೇವೆ ವಿಸ್ತರಿಸಿದೆ.

<><><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹೊಸ ವರ್ಷಾಚರಣೆಗೆ ಭರದ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, ಎಲ್ಲ ಜಿಲ್ಲೆಗಳಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಬೆಟ್ಟ, ಸ್ಕಂದಗಿರಿ, ಕೈವಾರ ಬೆಟ್ಟಕ್ಕೆ  ಇಂದು ಮಧ್ಯಾಹ್ನದಿಂದ ನಾಳೆ ಬೆಳಗ್ಗೆ ೧೦ ಗಂಟೆಯವರೆಗೆ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ. ಹೊಸ ವರ್ಷವನ್ನು ಬರಮಾಡಿಕೊಳ್ಳಲು ಕೊಡಗು ಜಿಲ್ಲೆಗೆ  ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ. ಸಂಜೆ ವೇಳೆ ಮಡಿಕೇರಿಯ ರಾಜಾಸೀಟ್‌ಗೆ ಅತ್ಯಧಿಕ ಸಂಖ್ಯೆಯ ಪ್ರವಾಸಿಗರು ಬರುವ ನಿರೀಕ್ಷೆಯಿದ್ದು, ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ಜಿಲ್ಲೆಯಾದ್ಯಂತ ರೇವ್ ಪಾರ್ಟಿ ಸೇರಿದಂತೆ ಮಾದಕ ದ್ರವ್ಯ ಸೇವಿಸುವವರು ಪತ್ತೆಯಾದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಎಚ್ಚರಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಹೆಚ್ಚಿನ ಪೋಲೀಸ್ ಬಂದೋಬಸ್ತ್ ಮಾಡಲಾಗಿದ್ದು ಜಿಲ್ಲೆಯಲ್ಲಿ ೨೫ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿಯೂ ಹೊಸ ವರ್ಷ ಆಚರಣೆ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ. ಪ್ರವಾಸಿಗರು ಇಂದು ಸಂಜೆ ೬ ಗಂಟೆಯ ಬಳಿಕ ಯಾರೂ ಸಮುದ್ರಕ್ಕೆ ಇಳಿಯಬಾರದು ಎಂದು ನಿರ್ದೇಶನ ನೀಡಿದ್ದಾರೆ. ನೂತನ ವರ್ಷದ ಸಂಭ್ರಮಾಚರಣೆ ವೇಳೆ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ತುಮಕೂರು ಜಿಲ್ಲೆಯ ಪ್ರವಾಸಿ ತಾಣಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ತಿಳಿಸಿದ್ದಾರೆ.  ಹೊಸ ವರ್ಷದ ಸ್ವಾಗತಕ್ಕೆ  ವಾಣಿಜ್ಯ ನಗರಿ ದಾವಣಗೆರೆ ಸಜ್ಜುಗೊಂಡಿದ್ದು, ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ. ಸೂಕ್ಷ್ಮ ಪ್ರದೇಶದಲ್ಲಿ ಡ್ರೋನ್ ಮೂಲಕ ನಿಗಾವಹಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಸ್ಪಷ್ಟಪಡಿಸಿದ್ದಾರೆ.

<><><><>

ವೈವಿಧ್ಯತೆಯ ನಡುವೆ ಮನುಷ್ಯರು ಒಗ್ಗಟ್ಟಾಗಿ ಬಾಳುವ ಭಾರತ ನಿರ್ಮಾಣ ನಾರಾಯಣ ಗುರುಗಳ ಗುರಿಯಾಗಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಕೇರಳದ ತಿರುವನಂತಪುರದಲ್ಲಿರುವ ಶಿವಗಿರಿ ಮಠಕ್ಕೆ ಭೇಟಿ ನೀಡಿದ ಅವರು, ಬ್ರಹ್ಮಶ್ರೀ ನಾರಾಯಣ ಗುರುಗಳ ಸಮಾಧಿಗೆ ಗೌರವ ಸಲ್ಲಿಸಿ ಮಾತನಾಡಿ, ಕೋಮುವಾದದ ಬಗ್ಗೆ ನಾರಾಯಣ ಗುರುಗಳು ಅಂದೇ ಎಚ್ಚರಿಕೆ ನೀಡಿದ್ದರು ಎಂದು ತಿಳಿಸಿದರು. ಶಿಕ್ಷಣವನ್ನು ಉತ್ತೇಜಿಸುವ ಮೂಲಕ ಅನಿಷ್ಟ ಪದ್ಧತಿಗಳನ್ನು ವಿರೋಧಿಸುವ ಮೂಲಕ ಹಾಗೂ ಲಿಂಗ ಸಮಾನತೆಯನ್ನು ಪ್ರತಿಪಾದಿಸುವ ಮೂಲಕ ಮಹಿಳಾ ಸಬಲೀಕರಣಕ್ಕೆ ನಾರಯಣ ಗುರುಗಳು ಒತ್ತು ನೀಡಿದ್ದರು ಎಂದು ಹೇಳಿದರು.

<><><><>

ಕೋಗಿಲು ಕ್ರಾಸ್‌ನ ನೆಲಸಮವಾದ ಜಾಗದಲ್ಲಿ ಯಾವುದೇ ಬಾಂಗ್ಲಾದೇಶದ ಪ್ರಜೆಗಳು ಕಂಡುಬಂದರೆ ಅವರನ್ನು ಗಡಿಪಾರು ಮಾಡಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲ ನಿವಾಸಿಗಳು ಬಾಂಗ್ಲಾದೇಶದವರು ಎಂದು ಹೇಳಿಕೆ ನೀಡಿರುವುದು ಸೂಕ್ತವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಎಲ್ಲ ಫಲಾನುಭವಿಗಳ ದಾಖಲೆಗಳನ್ನು ಸಂಪೂರ್ಣವಾಗಿ ಪರಿಶೀಲಿಸಲಾಗುವುದು ಎಂದು ಹೇಳಿದ ಅವರು, ರಾಜ್ಯದಲ್ಲಿ ಅಕ್ರಮ ವಲಸಿಗರನ್ನು ಗುರುತಿಸುವ ಪ್ರಕ್ರಿಯೆಯನ್ನು ನಿರಂತರವಾಗಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ರಾಜ್ಯ ಸರ್ಕಾರ ಭೂ ಅತಿಕ್ರಮಣದಾರರಿಗೆ ಮನೆ ನಿರ್ಮಾಣ ಮಾಡಿಕೊಡುವ ಮೂಲಕ ಕೆಟ್ಟ ಸಂಪ್ರದಾಯಕ್ಕೆ ನಾಂದಿ ಹಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಮೂಲಕ ಸರ್ಕಾರ ಭೂ-ಮಾಫಿಯಾಗೆ ಪ್ರೋತ್ಸಾಹ ನೀಡುತ್ತಿದೆ ಎಂದು ದೂರಿದ್ದಾರೆ. ಈ ಜಾಗದಲ್ಲಿ ೧೦೦ ಕೋಟಿ ರೂಪಾಯಿಗಳ ಘನತ್ಯಾಜ್ಯ ನಿರ್ಮಾಣ ಘಟಕವನ್ನು ಸ್ಥಾಪಿಸಲು ಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕಳೆದ ೨೦ ವರ್ಷಗಳಿಂದ ಈ ಭೂಮಿ ಸಂಪೂರ್ಣವಾಗಿ ಖಾಲಿಯಾಗಿದ್ದು, ೬ ತಿಂಗಳಿನಿಂದ ಜನರು ಈ ಪ್ರದೇಶದಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿ ವಾಸಿಸಲು ಪ್ರಾರಂಭಿಸಿದ್ದಾರೆ ಎಂದು ಹೇಳಿದ್ದಾರೆ.

<><><><>

ಕಂದಾಯ ನ್ಯಾಯಾಲಯಗಳಲ್ಲಿ ಇನ್ನು ಮುಂದೆ ಆನ್‌ಲೈನ್ ವ್ಯವಸ್ಥೆ ಜಾರಿಯಾಗಲಿದೆ ಎಂದು ಕಂದಾಯ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ಹೇಗೆ ನಡೆಸಬೇಕು ಎಂದು ಈ ಹಿಂದೆ ಯಾವುದೇ ಸ್ಪಷ್ಟ ನಿಯಮಗಳು ಇರಲಿಲ್ಲ. ಪರಿಣಾಮ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳು ತಮ್ಮ

ಅಧಿಕಾರ ವ್ಯಾಪ್ತಿ ಮೀರಿ ಅನೇಕ ಆದೇಶಗಳನ್ನು ಹೊರಡಿಸಿರುವ ಉದಾಹರಣೆಗಳು ಸಾಕಷ್ಟಿವೆ. ಹೀಗಾಗಿ ಕಂದಾಯ ನ್ಯಾಯಾಲಯಗಳನ್ನು ಮೊದಲು ಜನಸ್ನೇಹಿಗೊಳಿಸಬೇಕು ಹಾಗೂ ಇಲ್ಲಿನ ನ್ಯಾಯಿಕ ತೀರ್ಮಾನಗಳನ್ನು ಪಾರದರ್ಶಕಗೊಳಿಸುವ ಹಿನ್ನೆಲೆಯಲ್ಲಿ ಆನ್‌ಲೈನ್ ವ್ಯವಸ್ಥೆ ಜಾರಿ ಮಾಡಲಾಗಿದೆ. ಕಂದಾಯ ನ್ಯಾಯಾಲಯಗಳಿಗೆ ವಾದಿ-ಪ್ರತಿವಾದಿಗಳು ಸುತ್ತುವುದರ ಬದಲಿಗೆ ಅವರು ಆನ್‌ಲೈನ್ ಮುಖಾಂತರವೇ ನ್ಯಾಯಾಲಯ ಕಲಾಪಗಳಿಗೆ ಭಾಗವಹಿಸುವ ಸುಲಭ ಮಾರ್ಗ ನೀಡಲಾಗಿದೆ. ಪಾರದರ್ಶಕತೆ ಮತ್ತು ನಾಗರಿಕರ ಅನುಕೂಲತೆ ಮತ್ತು ಸಬಲೀಕರಣವನ್ನು ಹೆಚ್ಚಿಸಲು ಸರ್ಕಾರವು ಪೈಲಟ್ ಆಧಾರದ ಮೇಲೆ ಕಂದಾಯ ನ್ಯಾಯಾಲಯಗಳ ನೇರ ಪ್ರಸಾರವನ್ನು ಪರಿಚಯಿಸಲಿದೆ.

<><><><>

೨೦೨೫ ರಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತ ವಿಶೇಷ ಕಾರ್ಯಕ್ರಮ 'ಕಾಲಚಕ್ರ' ಇಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ. ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿರುವ ೪೫ ನಿಮಿಷಗಳ ಈ ಕಾರ್ಯಕ್ರಮ ಇಂದು ರಾತ್ರಿ ೯ ಗಂಟೆ ೧೫ ನಿಮಿಷದಿಂದ ೧೦ ಗಂಟೆಯವರೆಗೆ ಪ್ರಸಾರವಾಗಲಿದೆ. ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಇಂದು ಸಂಜೆ ೫.೩೦ ಕ್ಕೆ ರಾಜ್ಯ ಸರ್ಕಾರದ ಇ-ಸ್ವತ್ತು ಯೋಜನೆ ಕುರಿತ ಕಾರ್ಯಕ್ರಮ ಪ್ರಸಾರ ಮಾಡಲಿದೆ. ಈ ಎರಡೂ ಕಾರ್ಯಕ್ರಮಗಳು ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲದಲ್ಲಿ ಮೂಡಿಬರಲಿವೆ.

<><><><>

ಸಿರಿಧಾನ್ಯಗಳ ಕುರಿತು ಮುಂದಿನ ಪೀಳಿಗೆಗೆ ತಿಳಿಸುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್.ನಂದಿನಿ ತಿಳಿಸಿದ್ದಾರೆ. "ಸಿರಿಧಾನ್ಯ ರೋಡ್ ಶೋ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಇಲಾಖೆಗಳ್ ಇಂದು ಸಿರಿಧಾನ್ಯಗಳ ಮಹತ್ವವನ್ನು ತಿಳಿಸಲು ಪ್ರಯತ್ನ ನಡೆಸುತ್ತಿದ್ದು, ಇದರಿಂದ ಸ್ವಸಹಾಯ ಗುಂಪುಗಳ ಮಹಿಳೆಯರಿಗೆ ಸಹಾಯವಾಗಲಿದೆ. ನೈಸರ್ಗಿಕ ಕೃಷಿ ಮಾಡುತ್ತಿರುವ ರೈತರು ಒಗ್ಗೂಡಿದಾಗ, ಸಾಧಕ ಬಾಧಕಗಳನ್ನು ಹಂಚಿಕೆ ಮಾಡಿದಾಗ ಮಾತ್ರ ಸಾವಯವ ಕೃಷಿಗೆ ಪ್ರೇರಣೆ ದೊರೆಯಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ವಾಣಿಜ್ಯ ಮೇಳದ ಅಂಗವಾಗಿ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಜಿಲ್ಲಾ ಮಟ್ಟದ ಪಾಕ ಸ್ಪರ್ಧೆ ದಾವಣಗೆರೆಯಲ್ಲಿಂದು ಜರುಗಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>